**All India Radio: Bangalore**
**National Bulletins In Kannada**
**08.06.2025 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**08.06.2025 / 7.35 am**

ಮುಖ್ಯಾಂಶಗಳು

೧. ಭಾರತ-ಬ್ರಿಟನ್ ನಡುವಣ ಬಲಗೊಳ್ಳುತ್ತಿರುವ ದ್ವಿಪಕ್ಷೀಯ ಸಂಬಂಧ; ಪ್ರಧಾನಿ ನರೇಂದ್ರ ಮೋದಿ ಸ್ವಾಗತ

೨. ಬೆಂಗಳೂರು ಚಿನ್ನಸ್ವಾಮಿ ಕ್ರೀಡಾಂಗಣ ಬಳಿ ನಡೆದಿದ್ದ ಕಾಲ್ತುಳಿತ ದುರಂತ; ಮೃತರ ಕುಟುಂಬಗಳಿಗೆ ಪರಿಹಾರ ಮೊತ್ತ ೨೫ ಲಕ್ಷ ರೂಪಾಯಿಗೆ ಹೆಚ್ಚಳ

೩. ತೆಲಂಗಾಣದಲ್ಲಿ ಇಂದು ಸಚಿವ ಸಂಪುಟ ವಿಸ್ತರಣೆ

೪. ಫ್ರೆಂಚ್ ಓಪನ್ ಟೆನಿಸ್; ಮಹಿಳಾ ಸಿಂಗಲ್ಸ್‌ನಲ್ಲಿ ಪ್ರಶಸ್ತಿ ಮುಡಿಗೇರಿಸಿಕೊಂಡ ಅಮೆರಿಕದ ಟೆನಿಸ್ ತಾರೆ ಕೊಕೊ ಗೌಫ್

**<><*<><>*><>**

ಬ್ರಿಟನ್ ವಿದೇಶಾಂಗ ಕಾರ್ಯದರ್ಶಿ ಡೇವಿಡ್ ಲ್ಯಾಮಿ ನಿನ್ನೆ ನವದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು. ಉಭಯ ದೇಶಗಳ ನಡುವಣ ದ್ವಿಪಕ್ಷೀಯ ಸಂಬಂಧದಲ್ಲಿ ಹೆಚ್ಚುತ್ತಿರುವ ಗತಿಯನ್ನು ಸ್ವಾಗತಿಸಿರುವ ಪ್ರಧಾನಿ ಮೋದಿ, ಆಳವಾದ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಗೆ ತೃಪ್ತಿ ವ್ಯಕ್ತಪಡಿಸಿದ್ದಾರೆ. ತಂತ್ರಜ್ಞಾನ ಭದ್ರತಾ ಉಪ ಕ್ರಮದಡಿ ನಿರಂತರ ಸಹಯೋಗವನ್ನು ಸ್ವಾಗತಿಸಿದ ಪ್ರಧಾನಿ, ವಿಶ್ವಾಸಾರ್ಹ ಮತ್ತು ಸುರಕ್ಷಿತ ನಾವೀನ್ಯತೆ ಪರಿಸರ ವ್ಯವಸ್ಥೆಗಳನ್ನು ರೂಪಿಸುವ ಸಾಮರ್ಥ್ಯವನ್ನು ಪ್ರಸ್ತಾಪಿಸಿದ್ದಾರೆ. ವ್ಯಾಪಾರ ಹಾಗೂ ಹೂಡಿಕೆ, ರಕ್ಷಣೆ ಹಾಗೂ ಭದ್ರತೆ, ತಂತ್ರಜ್ಞಾನ, ನಾವೀನ್ಯತೆ ಹಾಗೂ ಶುದ್ಧ ಇಂಧನ ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ಸಹಕಾರ ಮತ್ತಷ್ಟು ಹೆಚ್ಚಿಸುವಲ್ಲಿ ಬ್ರಿಟನ್ ಬಲವಾದ ಆಸಕ್ತಿ ಹೊಂದಿದೆ ಎಂದು ವಿದೇಶಾಂಗ ಕಾರ್ಯದರ್ಶಿ ಡೇವಿಡ್ ಲ್ಯಾಮಿ ತಿಳಿಸಿದರು. ಮುಕ್ತ ವ್ಯಾಪಾರ ಒಪ್ಪಂದ ಎರಡೂ ದೇಶಗಳಿಗೆ ಹೊಸ ಆರ್ಥಿಕ ಅವಕಾಶಗಳನ್ನು ತೆರೆಯುತ್ತದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು. ಪ್ರಾದೇಶಿಕ ಹಾಗೂ ಜಾಗತಿಕ ವಿಷಯಗಳ ಕುರಿತು ಇಬ್ಬರು ನಾಯಕರು ಅಭಿಪ್ರಾಯ ವಿನಿಮಯ ಮಾಡಿಕೊಂಡರು. ಬ್ರಿಟನ್ ವಿದೇಶಾಂಗ ಕಾರ್ಯದರ್ಶಿ ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಬಲವಾಗಿ ಖಂಡಿಸಿದರು. ಗಡಿಯಾಚೆಗಿನ ಭಯೋತ್ಪಾದನೆ ವಿರುದ್ಧ ಭಾರತದ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿದರು. ಭಯೋತ್ಪಾದನೆ ಮತ್ತು ಅದನ್ನು ಬೆಂಬಲಿಸುವವರ ವಿರುದ್ಧ ನಿರ್ಣಾಯಕ ಅಂತರರಾಷ್ಟ್ರೀಯ ಕ್ರಮದ ಅಗತ್ಯವನ್ನು ಪ್ರಧಾನಿ ಮೋದಿ ಒತ್ತಿ ಹೇಳಿದರು.

**<><*<><>*><>**

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಕಳೆದ ಬುಧವಾರ ಸಂಭವಿಸಿದ್ದ ಕಾಲ್ತುಳಿತ ಘಟನೆಯಲ್ಲಿ ಮೃತಪಟ್ಟ ಎಲ್ಲಾ ೧೧ ವ್ಯಕ್ತಿಗಳ ಕುಟುಂಬಗಳಿಗೆ ಪರಿಹಾರ ಮೊತ್ತ ಹೆಚ್ಚಿಸಲು ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶಿಸಿದ್ದು, ಪರಿಹಾರ ಮೊತ್ತವನ್ನು ತಲಾ ೨೫ ಲಕ್ಷ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ.ರಾಜ್ಯ ಸರ್ಕಾರ ಈ ಮೊದಲು ಪ್ರತಿ ಕುಟುಂಬಕ್ಕೆ ೧೦ ಲಕ್ಷ ರೂಪಾಯಿ ಪರಿಹಾರ ಘೋಷಿಸಿತ್ತು. ಕೇಂದ್ರ ಸಚಿವರಾದ ಎಚ್.ಡಿ. ಕುಮಾರಸ್ವಾಮಿ, ಶೋಭಾ ಕರಂದ್ಲಾಜೆ, ರಾಜ್ಯ ಬಿಜೆಪಿ ನಾಯಕತ್ವ ಮೃತರ ಕುಟುಂಬಗಳಿಗೆ ೫೦ ಲಕ್ಷ ರೂಪಾಯಿ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದ್ದವು. ರಾಯಲ್ ಚಾಲೆಂಜರ್ಸ್ ಬೆಂಗಳೂರು - ಆರ್‌ಸಿಬಿ ಮೃತ ಕುಟುಂಬಗಳಿಗೆ ೧೦ ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದರೆ, ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ೫ ಲಕ್ಷ ರೂಪಾಯಿ ಪರಿಹಾರ ಘೋಷಿಸಿದೆ. ದುರಂತಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರಾಜೀನಾಮೆ ನೀಡಬೇಕು ಎಂದು ಬಿಜೆಪಿ ಒತ್ತಾಯಿಸುತ್ತಿದೆ. ರಾಜ್ಯ ಸರ್ಕಾರ ಮೊದಲು ಘೋಷಿಸಿದ್ದ ೧೦ ಲಕ್ಷ ರೂಪಾಯಿ ಪರಿಹಾರ ಅತ್ಯಲ್ಪವಾಗಿದ್ದು, ಮೊತ್ತ ಹೆಚ್ಚಿಸಬೇಕು ಎಂದು ಎಂದು ಬಿಜೆಪಿ ಆಗ್ರಹಿಸಿದೆ. ಈ ನಡುವೆ ಸಿಐಡಿ ವಿಶೇಷ ವಿಭಾಗ ಚಿನ್ನಸ್ವಾಮಿ ಕಾಲ್ತುಳಿತ ದುರಂತದ ತನಿಖೆಯನ್ನು ಪ್ರಾರಂಭಿಸಿದೆ. ಅದೇ ಸಮಯದಲ್ಲಿ, ಬೆಂಗಳೂರು ನಗರ ಜಿಲ್ಲೆಯ ಉಪ ಆಯುಕ್ತರಿಂದ ಮ್ಯಾಜಿಸ್ಟೀರಿಯಲ್ ವಿಚಾರಣೆಯೂ ಪ್ರಗತಿಯಲ್ಲಿದೆ. ಸಿಐಡಿ ಅಧಿಕಾರಿಗಳು ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಿದ್ದಾರೆ.

**<><*<><>*><>**

ತೆಲಂಗಾಣದಲ್ಲಿ ರಾಜ್ಯ ಸಚಿವ ಸಂಪುಟ ವಿಸ್ತರಣೆ ಇಂದು ಅಪರಾಹ್ನ ನಡೆಯುವ ಸಾಧ್ಯತೆಯಿದೆ. ಈ ಬಾರಿಯ ವಿಸ್ತರಣೆಯಲ್ಲಿ ನಾಲ್ಕು ಮಂದಿ ಶಾಸಕರು, ಸಚಿವರಾಗಿ ಪ್ರಮಾಣವಚನ ಸ್ವೀಕರಿಸುವ ಸಾಧ್ಯತೆಗಳಿವೆ. ಹೈದರಾಬಾದ್‌ನ ರಾಜಭವನದಲ್ಲಿ ಪ್ರಮಾಣ ವಚನ ಸಮಾರಂಭಕ್ಕೆ ಸಾಮಾನ್ಯ ಆಡಳಿತ ಇಲಾಖೆ ಎಲ್ಲಾ ವ್ಯವಸ್ಥೆಗಳನ್ನು ಮಾಡುತ್ತಿದೆ. ಆದರೆ, ಸಂಪುಟ ಸೇರಲಿರುವ ಶಾಸಕರ ಮಾಹಿತಿ ಇನ್ನಷ್ಟೇ ಅಧಿಕೃತವಾಗಿ ಹೊರಬೀಳಬೇಕಿದೆ. ಎರಡು ದಿನಗಳ ಹಿಂದೆ ನವದೆಹಲಿಗೆ ತೆರಳಿದ್ದ ತೆಲಂಗಾಣ ರಾಜ್ಯಪಾಲ ಜಿಷ್ಣುದೇವ್ ವರ್ಮಾ ಕಳೆದ ರಾತ್ರಿ ಹೈದರಾಬಾದ್‌ಗೆ ಆಗಮಿಸಿದ್ದಾರೆ.

ರಾಜ್ಯ ಸಚಿವ ಸಂಪುಟದಲ್ಲಿ ಈಗ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಉಪಮುಖ್ಯಮಂತ್ರಿ ಮಲ್ಲು ಬಟ್ಟಿವಿಕ್ರಮಾರ್ಕ ಸೇರಿದಂತೆ ೧೨ ಸದಸ್ಯರನ್ನೊಳಗೊಂಡಿದೆ.

**<><*<><>*><>**

ಕಳೆದ ಒಂದು ದಶಕದಲ್ಲಿ ಭಾರತ ಸರ್ವತೋಮುಖವಾಗಿ ಗಮನಾರ್ಹ ಬದಲಾವಣೆಯನ್ನು ಕಂಡಿದ್ದು, ಸೇವೆ, ಸುಶಾಸನ ಮತ್ತು ಬಡವರ ಕಲ್ಯಾಣದ ತತ್ವದಡಿ ಮುನ್ನಡೆಯುತ್ತಿದೆ. ಕೇಂದ್ರ ಸರ್ಕಾರ ಕಳೆದ ೧೧ ವರ್ಷಗಳಲ್ಲಿ ಕೈಗೊಂಡಿರುವ ಹಲವು ಪ್ರಮುಖ ಪ್ರಯತ್ನಗಳ ಕುರಿತು ಆಕಾಶವಾಣಿ ಸುದ್ದಿ ವಿಭಾಗ ವಿಶೇಷ ವರದಿಯನ್ನು ಪ್ರಸಾರ ಮಾಡುತ್ತಿದೆ. ಈ ಮಾಲಿಕೆಯಲ್ಲಿ ಇಂದು, ಮಧ್ಯಮ ವರ್ಗದ ಸಬಲೀಕಣಕ್ಕಾಗಿ ಆರ್ಥಿಕ ಸುಧಾರಣೆಗಳು ಕುರಿತ ವರದಿ ಇಲ್ಲಿದೆ.

ವರದಿ:

"ಒಂದು ದಶಕಕ್ಕೂ ಹೆಚ್ಚು ಕಾಲ, ಭಾರತದ ಮಧ್ಯಮ ವರ್ಗವು ರಾಷ್ಟ್ರದ ಅಭಿವೃದ್ಧಿ ಪ್ರಯಾಣದ ಕೇಂದ್ರದಲ್ಲಿ ನಿಂತಿದೆ. ಅವರ ಆಕಾಂಕ್ಷೆಗಳನ್ನು ಆಲಿಸಲಾಗಿದೆ ಮಾತ್ರವಲ್ಲದೆ ನಿರ್ಣಾಯಕ ಕ್ರಮದಿಂದ ಗೌರವಿಸಲಾಗಿದೆ. ತೆರಿಗೆ ಸುಧಾರಣೆಗಳು ಮತ್ತು ಪರಿಹಾರಗಳು, ಸಾಮಾಜಿಕ ಭದ್ರತೆ ಮತ್ತು ಕೌಶಲ್ಯ ಅಭಿವೃದ್ಧಿ ಮಧ್ಯಮ ವರ್ಗದ ಸಬಲೀಕರಣದ ಕಡೆಗೆ ಸರ್ಕಾರದ ಪ್ರಯತ್ನಗಳ ಪ್ರಮುಖ ಆಧಾರಸ್ತಂಭಗಳಾಗಿವೆ. ಇತ್ತೀಚಿನ ಕೇಂದ್ರ ಬಜೆಟ್ ಹೊಸ ತೆರಿಗೆ ಪದ್ಧತಿಯಡಿಯಲ್ಲಿ ೧೨ ಲಕ್ಷ ರೂಪಾಯಿಗಳವರೆಗಿನ ಆದಾಯವನ್ನು ತೆರಿಗೆ ಮುಕ್ತಗೊಳಿಸಿದೆ. ಪೂರ್ವ-ಭರ್ತಿ ಮಾಡಿದ ಆದಾಯ ತೆರಿಗೆ ರಿಟರ್ನ್ಸ್ ಮತ್ತು ಮುಖರಹಿತ ಮೌಲ್ಯಮಾಪನ ವ್ಯವಸ್ಥೆಯು ತೆರಿಗೆ ಅನುಸರಣೆಯನ್ನು ವೇಗ, ಸರಳ ಮತ್ತು ಹೆಚ್ಚು ಪಾರದರ್ಶಕವಾಗಿಸಿದೆ. ಏಕೀಕೃತ ಪಿಂಚಣಿ ಯೋಜನೆ, ಯುಪಿಎಸ್, ೨೫ ವರ್ಷಗಳ ಸೇವೆಯನ್ನು ಹೊಂದಿರುವ ಸರ್ಕಾರಿ ಉದ್ಯೋಗಿಗಳಿಗೆ ಪಿಂಚಣಿಯಾಗಿ ಸರಾಸರಿ ಮೂಲ ವೇತನದ ೫೦ ಪ್ರತಿಶತವನ್ನು ಖಾತರಿಪಡಿಸುತ್ತದೆ. ಏತನ್ಮಧ್ಯೆ, ಕಳೆದ ದಶಕದಲ್ಲಿ ಸರಾಸರಿ ಹಣದುಬ್ಬರ ದರವನ್ನು ಶೇಕಡಾ ೫ ಕ್ಕೆ ಇಳಿಸಲಾಗಿದೆ, ಇದು ಹಿಂದಿನ ಹತ್ತು ವರ್ಷಗಳಲ್ಲಿ ಶೇಕಡಾ ೮.೨ ರಷ್ಟು ಇತ್ತು. ಕೌಶಲ್ಯ ಅಭಿವೃದ್ಧಿಗೂ ಅಷ್ಟೇ ಪರಿವರ್ತನೆಯಾಗಿದೆ. ಪ್ರಧಾನ ಮಂತ್ರಿ ಕೌಶಲ್ ವಿಕಾಸ್ ಯೋಜನೆಯಡಿಯಲ್ಲಿ, ೧.೬೩ ಕೋಟಿಗೂ ಹೆಚ್ಚು ಯುವಕರು ಉದ್ಯಮ-ಸಂಬಂಧಿತ ತರಬೇತಿಯನ್ನು ಪಡೆದಿದ್ದಾರೆ. ರಾಷ್ಟ್ರೀಯ ಶಿಷ್ಯವೃತ್ತಿ ಪ್ರಚಾರ ಯೋಜನೆಯು ಅಂದಿನಿಂದ ೪೦ ಲಕ್ಷಕ್ಕೂ ಹೆಚ್ಚು ಶಿಷ್ಯವೃತ್ತಿಗಳನ್ನು ಕೈಗಾರಿಕೆಗಳಲ್ಲಿ ನಿಯೋಜಿಸಲು ಅನುಕೂಲ ಮಾಡಿಕೊಟ್ಟಿದೆ. ೨೦೧೬. ಕೈಗಾರಿಕಾ ತರಬೇತಿ ಸಂಸ್ಥೆಗಳ ಸಂಖ್ಯೆಯೂ ಗಮನಾರ್ಹವಾಗಿ ಹೆಚ್ಚಾಗಿದೆ, ೨೦೧೪ ರಲ್ಲಿ ಸುಮಾರು ೯ ಸಾವಿರ ೯೦೦ ರಿಂದ ೨೦೨೪ ರಲ್ಲಿ ೧೪ ಸಾವಿರ ೬೦೦ ಕ್ಕೆ ಏರಿದೆ.

**<><*<><>*><>**

ಹಿರಿಯ ಬಿಜೆಪಿ ನಾಯಕ, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ತಮಿಳುನಾಡಿನ ಮದುರೈನಲ್ಲಿಂದು ಬಿಜೆಪಿ ರಾಜ್ಯ ಕೋರ್ ಕಮಿಟಿ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಪಕ್ಷದ ರಾಜ್ಯ, ಜಿಲ್ಲಾ ಮತ್ತು ಮಂಡಲ ಮಟ್ಟದ ಪದಾಧಿಕಾರಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ಸುಪ್ರಸಿದ್ಧ ಮೀನಾಕ್ಷಿ ದೇವಸ್ಥಾನಕ್ಕೂ ಭೇಟಿ ನೀಡಿ ದರ್ಶನ ಪಡೆಯಲಿದ್ದಾರೆ. ಚುನಾವಣಾ ಸಿದ್ಧತೆಯ ಬಗ್ಗೆ ಪಕ್ಷದ ನಾಯಕರು ಹಾಗೂ ಪದಾಧಿಕಾರಿಗಳ ಉದ್ದೇಶಿಸಿ ಮಾತನಾಡಲಿದ್ದಾರೆ. ಬಿಜೆಪಿ ರಾಜ್ಯ ಘಟಕದ ಉಪಾಧ್ಯಕ್ಷ ನಾರಾಯಣನ್ ತಿರುಪತಿ, ಅಮಿತ್ ಶಾ ಅವರ ರಾಜ್ಯ ಸಂಜೆ, ಒಥಕಡೈನಲ್ಲಿರುವ ವೇಲಮ್ಮಾಳ್ ಗ್ಲೋಬಲ್ ಆಸ್ಪತ್ರೆ ಮೈದಾನದಲ್ಲಿ ಪಕ್ಷದ ಸಭೆಯನ್ನು ಉದ್ದೇಶಿಸಿ ಅಮಿತ್ ಶಾ ಮಾತನಾಡಲಿದ್ದಾರೆ. ಸಭೆಯಲ್ಲಿ ತಮಿಳುನಾಡಿನಾದ್ಯಂತ ಬಿಜೆಪಿ ಕಾರ್ಯಕರ್ತರು ಭಾಗವಹಿಸಲಿದ್ದಾರೆ.

**<><*<><>*><>**

ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಬೆಂಗಳೂರಿಗೆ ಇಂದು ಆಗಮಿಸಲಿದ್ದಾರೆ. ಬೆಂಗಳೂರಿನ ಭಾರತೀಯ ಕೃಷಿ ಸಂಶೋಧನಾ ಮಂಡಳಿ ಮತ್ತು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯ ಸಹಯೋಗದಲ್ಲಿ ಭಾರತೀಯ ತೋಟಗಾರಿಕೆ ಸಂಶೋಧನಾ ಸಂಸ್ಥೆಯ ಆವರಣದಲ್ಲಿ ಆಯೋಜಿಸಿರುವ 'ವಿಕಸಿತ ಕೃಷಿ ಸಂಕಲ್ಪ ಅಭಿಯಾನ' ಕಾರ್ಯಕ್ರಮದಲ್ಲಿ ಸಚಿವರು ಭಾಗವಹಿಸಲಿದ್ದಾರೆ. ಸುಮಾರು ೫೦೦ಕ್ಕೂ ಹೆಚ್ಚು ರೈತರನ್ನುದ್ದೇಶಸಿ ಕೇಂದ್ರ ಸಚಿವರು ಮಾತನಾಡಲಿದ್ದು, ಕರ್ನಾಟಕಕ್ಕೆ ಸಂಬಂಧಿಸದಂತೆ ವಿವಿಧ ಸಮಸ್ಯೆಗಳ ಕುರಿತು ಅವರೊಂದಿಗೆ ಸಂವಾದ ನಡೆಸಲಿದ್ದಾರೆ. ತಮ್ಮ ಪ್ರವಾಸದ ಭಾಗವಾಗಿ ರೈತರ ಕ್ಷೇತ್ರಗಳಿಗೆ ಭೇಟಿ ನೀಡಲಿದ್ದಾರೆ. ಇದರ ಜೊತೆಗೆ ಐಸಿಎಆರ್ ಸಂಸ್ಥೆಗಳ ತಂತ್ರಜ್ಞಾನ ಪ್ರದರ್ಶನವನ್ನು ವೀಕ್ಷಿಸಲಿದ್ದಾರೆ. ಆಧುನಿಕ ತಂತ್ರಜ್ಞಾನ ಮತ್ತು ಕೃಷಿಯಲ್ಲಿ ಸುಧಾರಿತ ಬಿತ್ತನೆ ಬೀಜ ಬಳಕೆ ಬಗ್ಗೆ ರೈತ ಸಮುದಾಯದಲ್ಲಿ ಜಾಗೃತಿ ಮೂಡಿಸಲು ಮೇ ೨೯ ರಿಂದ ಜೂನ್ ೧೨ರವರೆಗೆ ಅಭಿಯಾನ ಮುಂದುವರೆಯಲಿದೆ.

**<><*<><>*><>**

ಆಯುಷ್ಮಾನ್ ಭಾರತ್ ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆ ಮೂಲಕ ಬಿಹಾರ ರಾಜ್ಯ ಆರೋಗ್ಯ ಕ್ರಾಂತಿಗೆ ಸಾಕ್ಷಿಯಾಗುತ್ತಿದೆ. ರಾಜ್ಯಾದ್ಯಂತ ಲಕ್ಷಾಂತರ ಜನರ ಜೀವನವನ್ನು, ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಪರಿವರ್ತಿಸುತ್ತಿದೆ. ಗಮನಾರ್ಹ ಸಾಧನೆಯಲ್ಲಿ ರಾಜ್ಯವು ಒಂದು ವರ್ಷದೊಳಗೆ ಫಲಾನುಭವಿಗಳಿಗೆ ಒಂದು ಸಾವಿರ ಕೋಟಿ ರೂಪಾಯಿಗಳನ್ನು ಉಳಿಸಲು ನೆರವಾಗಿದೆ. ಇದು ಯೋಜನೆಯ ಹೆಚ್ಚುತ್ತಿರುವ ವ್ಯಾಪ್ತಿ ಮತ್ತು ಪರಿಣಾಮಕಾರಿತ್ವಕ್ಕೆ ಸಾಕ್ಷಿಯಾಗಿದೆ. ಬಿಹಾರದ ಗ್ರಾಮೀಣ ಪ್ರದೇಶಗಳಲ್ಲಿ ವಾಸಿಸುವ ಬಡ ಜನರು, ಕೇಂದ್ರ ಸರ್ಕಾರದ ಈ ಉಪಕ್ರಮದಿಂದ ಪ್ರಯೋಜನ ಪಡೆಯುತ್ತಿದ್ದಾರೆ. ಆಕಾಶವಾಣಿ ಸುದ್ದಿ ವಿಭಾಗದೊಂದಿಗೆ ಮಾತನಾಡಿದ ಆಯುಷ್ಮಾನ್ ಭಾರತ್

ಯೋಜನೆಯ ಫಲಾನುಭವಿಗಳು, ಈ ಯೋಜನೆಯ ಕಾರಣದಿಂದಾಗಿ, ಅವರು ಉಚಿತ ಚಿಕಿತ್ಸೆ ಮತ್ತು ದುಬಾರಿ ಶಸ್ತ್ರಚಿಕಿತ್ಸೆಯನ್ನು ಪಡೆಯಲು ಸಾಧ್ಯವಾಯಿತು ಎಂದು ಹೇಳಿದರು.

**<><*<><>*><>**

೨೦೨೫ ರ ಫ್ರೆಂಚ್ ಓಪನ್ ಟೆನಿಸ್‌ನಲ್ಲಿ ಮಹಿಳೆಯರ ಸಿಂಗಲ್ಸ್‌ನಲ್ಲಿ, ಅಮೆರಿಕದ ಟೆನಿಸ್ ತಾರೆ ಕೊಕೊ ಗೌಫ್ ನಿನ್ನೆ ರಾತ್ರಿ ನಡೆದ ರೋಚಕ ಫೈನಲ್ ಪಂದ್ಯದಲ್ಲಿ ಬೆಲರೂಸಿಯಾದ ವಿಶ್ವದ ನಂಬರ್ ಒನ್ ಆಟಗಾರ್ತಿ ಅರಿನಾ ಸಬಲೆಂಕಾ ಅವರನ್ನು ೬-೭, ೬-೨, ೬-೪ ಸೆಟ್‌ಗಳಿಂದ ಸೋಲಿಸಿ, ತಮ್ಮ ಮೊದಲ ರೋಲ್ಯಾಂಡ್ ಗ್ಯಾರೋಸ್ ಪ್ರಶಸ್ತಿ ಮತ್ತು ಎರಡನೇ ಗ್ರ್ಯಾಂಡ್ ಸ್ಲಾಮ್ ಕಿರೀಟವನ್ನು ಮುಡಿಗೇರಿಸಿಕೊಂಡಿದ್ದಾರೆ. ಈ ಗೆಲುವಿನೊಂದಿಗೆ, ೨೧ ವರ್ಷದ ತಾರೆ ಕೊಕೊ ಗೌಫ್ ೨೦೧೫ ರಲ್ಲಿ ಸೆರೆನಾ ವಿಲಿಯಮ್ಸ್ ನಂತರ ಪ್ಯಾರಿಸ್‌ನಲ್ಲಿ ಸಿಂಗಲ್ಸ್ ಪ್ರಶಸ್ತಿ ಗೆದ್ದ ಮೊದಲ ಅಮೇರಿಕನ್ ಮಹಿಳೆ ಮತ್ತು ೨೦೦೨ ರಲ್ಲಿ ವಿಲಿಯಮ್ಸ್ ನಂತರ ಅಮೆರಿಕದ ಅತ್ಯಂತ ಕಿರಿಯ ಆಟಗಾರ್ತಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಹಾಲಿ ಚಾಂಪಿಯನ್ ಕಾರ್ಲೋಸ್ ಅಲ್ಕರಾಜ್ ಇಂದು ವಿಶ್ವದ ನಂ.೧ ಜಾನಿಕ್ ಸಿನ್ನರ್ ಅವರನ್ನು ಎದುರಿಸಲಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**